# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ದಿನಾಂಕ:04.06.2022 ರಂದು ಬೆಳಗ್ಗೆ 11.00 ಗಂಟೆಗೆ ವಾರ್ಡ್ ನಂ.16 ಜಾಲಹಳ್ಳಿಯಲ್ಲಿ ಶ್ರೀ ಹೆಚ್. ಎಸ್. ದಯಾನಂದ, (ಸ.ಕಾ.ನಿ.ಅ,ಕೆಂಗೇರಿ) ನೋಡಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದವರು:-**

| ಕ್ರಮ ಸಂಖ್ಯೆ | ಅಧ್ಯಕ್ಷರು / ಸದಸ್ಯರ ಹೆಸರು | ಪದನಾಮ / ಇಲಾಖೆ |
|---|---|---|
| 1 | ಶ್ರೀ ಹೆಚ್. ಎಸ್. ದಯಾನಂದ | ಸ.ಕಾ.ನಿ.ಅ., ವಾರ್ಡ್ ನೋಡಲ್ ಅಧಿಕಾರಿಗಳು |
| 2 | ಪೂಜಾಶ್ರೀ ಆರ್. | ಸಹಾಯಕ ಅಭಿಯಂತರರು, |
| 3 | ಡಾ|| ಲೀಲಾವತಿ | ವೈದ್ಯಾಧಿಕಾರಿಗಳು, ಪ್ರಾಥಮಿಕ ಆರೋಗ್ಯ ಕೇಂದ್ರ |
| 4 | ಎಂ. ಅನಿತಾ ರಾಜ್ | ಕಿರಿಯ ಆರೋಗ್ಯ ಪರಿವೀಕ್ಷಕರು |
| 5 | ಶ್ರೀ ಶ್ರೀನಿವಾಸ | ಮೇಲ್ವಿಚಾರಕರು |
| 6 | ಶ್ರೀ ನಾಗರಾಜ್ | ಮೇಲ್ವಿಚಾರಕರು |
| 7 | ಶ್ರೀ ನವೀನ್ ಆರ್. | ವಾರ್ಡ್ ಮಾರ್ಷಲ್ |
| 8 | ಲಕ್ಷ್ಮೀದೇವಿ | ಲಿಂಕ್ ವರ್ಕರ್ಸ್ |
| 9 | ನಸೀಮಾ ಬಾನು | ಲಿಂಕ್ ವರ್ಕರ್ಸ್ |

ಮಾನ್ಯ ಅಧ್ಯಕ್ಷರ ಸ್ವಾಗತದೊಂದಿಗೆ ಅಧಿಕಾರಿಗಳು / ಹಾಜರಿದ್ದವರ ಪರಸ್ಪರ ಪರಿಚಯದೊಂದಿಗೆ ಸಭೆಯನ್ನು ಪ್ರಾರಂಭಿಸಲಾಯಿತು.

**1) ಕಾಮಗಾರಿ ಇಲಾಖೆ:**

ರಸ್ತೆ ಗುಂಡಿಗಳನ್ನು ಪರಿಶೀಲಿಸಿ, ಮುಚ್ಚಲು ಕ್ರಮವಹಿಸಲು ಸೂಚಿಸಿದರು. ಸಿಲ್ಟ್ & ಟ್ರ್ಯಾಕ್ಟರ್ ಅಡಿಯಲ್ಲಿ ಚರಂಡಿಗಳಲ್ಲಿನ ಹೂಳೆತ್ತಲು ಕ್ರಮವಹಿಸುವುದಾಗಿ ಕಾರ್ಯಪಾಲಕ ಅಭಿಯಂತರರು ದೂರವಾಣಿ ಮುಖೇನ ತಿಳಿಸಿದರು.

**2) ಬೀದಿ ನಾಯಿಗಳ ಬಗ್ಗೆ:-**

ಮಾನ್ಯ ಅಧ್ಯಕ್ಷರು ಮಾತನಾಡಿ, ವಾರ್ಡ್ ಪರಿಮಿತಿಯಲ್ಲಿ ಬೀದಿ ನಾಯಿಗಳ ಕಾಟ ಅತಿಯಾಗಿದ್ದು, ಸಾರ್ವಜನಿಕರಿಗೆ ಇದರಿಂದ ತೊಂದರೆಯಾಗುತ್ತಿದ್ದು, ಇವುಗಳ ನಿಯಂತ್ರಣಕ್ಕಾಗಿ, ಬಿಬಿಎಂಪಿ ಪಶುಪಾಲನಾ ವಿಭಾಗರವರಿಗೆ ಕ್ರಮವಹಿಸಲು ಸೂಚಿಸಿರುತ್ತಾರೆ.

3) ಬೀದಿ ದೀಪಗಳ ಬಗ್ಗೆ :-

ವಾರ್ಡ್ ವ್ಯಾಪ್ತಿಯಲ್ಲಿನ ಕೆಲವು ಪ್ರದೇಶಗಳಲ್ಲಿ ಬೀದಿ ದೀಪಗಳು ರಿಪೇರಿ ಇದ್ದು, ಕಾರ್ಯನಿರ್ವಹಣೆಯನ್ನು ಪರಿವೀಕ್ಷಿಸಿ, ಸರಿಪಡಿಸಲು ಸಂಬಂಧಪಟ್ಟವರಿಗೆ ಸೂಚಿಸಲಾಯಿತು.

4) ಬಿಡಬ್ಲ್ಯೂಎಸ್ಎಸ್‌ಬಿ:-

ಜಲವಾಯು ವಸತಿ ಸಮುಚ್ಚಯದಲ್ಲಿ ನೀರಿನ ಕೊರತೆಯಿದೆ ಎಂದು ಸಭೆಯಲ್ಲಿ ಹಾಜರಿದ್ದ ಅಲ್ಲಿಯ ನಿವಾಸಿಗಳು ನೀರಿನ ಸಮಸ್ಯೆಯ ಬಗ್ಗೆ ತಿಳಿಸಿದರು.

5) ಬ್ಲ್ಯಾಕ್ ಸ್ಪಾಟ್ (ಘನತ್ಯಾಜ್ಯ) ಗಳ ನಿರ್ವಹಣೆ:-

ಜಾಲಹಳ್ಳಿ ವಾರ್ಡ್‌ನಲ್ಲಿ ತ್ಯಾಜ್ಯ ನಿರ್ವಹಣೆಯ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡಿ, ವಾರ್ಡ್‌ನಲ್ಲಿ ಪ್ರತಿದಿನ ಕಸ ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಿರ್ವಹಿಸುತ್ತಿರುವುದಾಗಿ ತಿಳಿಸಿರುತ್ತಾರೆ.

ಮಾನ್ಯ ಅಧ್ಯಕ್ಷರು ಮಾತನಾಡಿ ಬ್ಲ್ಯಾಕ್ ಸ್ಪಾಟ್ ಸ್ಥಳಗಳಲ್ಲಿ ಔಷಧಿ ಸಿಂಪಡಣೆ ಮಾಡಲು ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ಸೂಚಿಸಲಾಗಿರುತ್ತದೆ. ಘನತ್ಯಾಜ್ಯ ಇಲಾಖೆಯ ನಿರ್ವಹಣೆ ಅಧಿಕಾರಿಗಳು ಮತ್ತು ಮೇಲ್ವಿಚಾರಕರು ಬ್ಲ್ಯಾಕ್‌ಸ್ಪಾಟ್ ಸ್ಥಳಗಳಲ್ಲಿ ರಾತ್ರಿ ಹೊತ್ತು ಕಸ ಸುರಿಯುವವರಿಗೆ ದಂಡ ವಿಧಿಸಲು ಸಭೆಯಲ್ಲಿ ಸೂಚಿಸಿರುತ್ತಾರೆ. ಹಾಗೂ ವಾರ್ಡ್ ಪರಿಮಿತಿಯಲ್ಲಿ ಸಂಗ್ರಹವಾಗುವಂತಹ ತ್ಯಾಜ್ಯಗಳನ್ನು ವಿಂಗಡಿಸಿ (ಒಣ ಕಸ ಮತ್ತು ಹಸಿ ಕಸ) ವಿಲೇವಾರಿ ಮಾಡಲು ಸೂಚಿಸಿರುತ್ತಾರೆ.

ಕೊನೆಯದಾಗಿ, ಅಧ್ಯಕ್ಷರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿ ಸಾರ್ವಜನಿಕರ ಸಮಸ್ಯೆ / ದೂರುಗಳನ್ನು ದಾಖಲಿಸಲು ವಾರ್ಡ್ ನಲ್ಲಿ ದೂರು ದಾಖಲಿಸುವ ಪುಸ್ತಕ ಲಭ್ಯವಿರುವಂತೆ ನೋಡಿಕೊಂಡು ಬರುವ ದೂರುಗಳನ್ನು ಆದ್ಯತೆಯ ಮೇರೆಗೆ ಕ್ರಮವಹಿಸುವಂತೆ ಹಾಗೂ ಪ್ರತಿ ವಾರ ಸಾಮೂಹಿಕ ಸ್ವಚ್ಛತಾ ಕಾರ್ಯಕ್ರಮವನ್ನು ಮುಂದುವರೆಸುಂತೆ ಸೂಚಿಸುತ್ತಾ, ಸಕಾಲದಲ್ಲಿ ಸಾರ್ವಜನಿಕ ಕುಂದುಕೊರತೆಗಳಿಗೆ ಸ್ಪಂದಿಸಿ ಪರಿಹರಿಸಲು ಕ್ರಮ ಕೈಗೊಂಡು ಇಲಾಖೆಗಳು ಸಮನ್ವಯತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿದರು.

ಮೇಲ್ಕಂಡ ಸಮಸ್ಯೆಗಳ ಬಗ್ಗೆ ಸುಧೀರ್ಘವಾಗಿ ಚರ್ಚಿಸಿ, ಕಾರ್ಯದರ್ಶಿಯವರ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

Poojashree.R
ಸದಸ್ಯ ಕಾರ್ಯದರ್ಶಿ
ವಾರ್ಡ್ ಸಂಖ್ಯೆ:16

04/06.
(ಹೆಚ್. ಎಸ್. ದಯಾನಂದ)
ಸ.ಕಾ.ನಿ.ಅ. ಹಾಗೂ
ವಾರ್ಡ್ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ:16